<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 967 (1124) |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12.03.2026 |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಖಾಲಿಯಲ್ಲಿರುವ 384 ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳನ್ನು ಹೊರತುಪಡಿಸಿ ಪ್ರಸ್ತುತ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ಸಂಖ್ಯೆ ಎಷ್ಟು; | ಖಾಲಿಯಲ್ಲಿರುವ 384 ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳನ್ನು ಹೊರತುಪಡಿಸಿ, ಪ್ರಸ್ತುತ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹಾಗೂ ನೇಮಕಾತಿಗಾಗಿ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆಯಲಾಗಿರುವ ಹುದ್ದೆಗಳ ಸಂಖ್ಯೆ: 80 |
| ಆ | ಅವುಗಳಲ್ಲಿ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯಿಂದ ಅನುಮೋದನೆಯನ್ನು ಪಡೆಯಲಾಗಿದೆ; | |
| ಇ | 384 ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ; ಈ ನೇಮಕಾತಿ ವಿಳಂಬಕ್ಕೆ ಕಾರಣವೇನು; ಯಾವ ಕಾಲಮಿತಿಯಲ್ಲಿ ಈ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು (ವಿವರ ನೀಡುವುದು); | 2023-24ನೇ ಸಾಲಿನ 384 ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗಾಗಿ ಆಯೋಗವು ದಿನಾಂಕ:26-02-2024ರಂದು ಅಧಿಸೂಚನೆ ಹೊರಡಿಸಿ ದಿನಾಂಕ:27-08-2024ರಂದು ಪೂರ್ವಭಾವಿ ಪರೀಕ್ಷೆಯನ್ನು ನಡೆಸಲಾಗಿರುತ್ತದೆ.<br><br>ತದನಂತರ ಭಾಷಾಂತರ ದೋಷದ ಗೊಂದಲಗಳ ಹಿನ್ನೆಲೆಯಲ್ಲಿ ದಿನಾಂಕ:29-12-2024ರಂದು ಪೂರ್ವಭಾವಿ ಮರುಪರೀಕ್ಷೆಯನ್ನು ನಡೆಸಿ, 1:15ರ ಅನುಪಾತದಲ್ಲಿ ಮುಖ್ಯ ಪರೀಕ್ಷೆಗೆ ಅರ್ಹತೆ ಪಡೆದಿರುವ ಅಭ್ಯರ್ಥಿಗಳ ಪಟ್ಟಿಯನ್ನು ದಿನಾಂಕ:10.02.2025 ರಂದು ಪ್ರಕಟಿಸಲಾಗಿರುತ್ತದೆ.<br><br>ಮುಖ್ಯ ಪರೀಕ್ಷೆ ಬರೆಯಲು ಹಲವಾರು ಅಭ್ಯರ್ಥಿಗಳು ಮಾನ್ಯ ಉಚ್ಚನ್ಯಾಯಾಲಯ ಹಾಗೂ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯಲ್ಲಿ ಪ್ರಕರಣಗಳನ್ನು ದಾಖಲಿಸಿದ್ದು, ಸದರಿ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯಗಳು ನೀಡಿದ ಮಧ್ಯಂತರ ಆದೇಶಗಳನ್ವಯ 322 ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತಾದರೂ, ಅವರುಗಳಲ್ಲಿ 306 ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಿರುತ್ತಾರೆ.<br><br>ಮುಖ್ಯ ಪರೀಕ್ಷೆಯನ್ನು ದಿನಾಂಕ:03-05-2025, 05-05-2025, 07-05-2025 ಮತ್ತು 09-05-2025ರವರೆಗೆ ನಡೆಸಲಾಗಿರುತ್ತದೆ.<br><br>ಮಾನ್ಯ ನ್ಯಾಯಾಲಯಗಳಿಂದ ಮಧ್ಯಂತರ ಆದೇಶ ಪಡೆದು ಮುಖ್ಯ ಪರೀಕ್ಷೆ ಬರೆದ ಅಭ್ಯರ್ಥಿಗಳಿಗೆ ಸಂಬಂಧಿಸಿದ ವಿಷಯವು ಮಾನ್ಯ ನ್ಯಾಯಾಲಯದಲ್ಲಿ ಬಾಕಿಯಿದ್ದು, ಇದು ನ್ಯಾಯಾಂಗ ನಿರ್ಣಯಕ್ಕಾಗಿ ಕಾಯುತ್ತಿರುವ (sub-judice) ವಿಷಯವಾಗಿರುತ್ತದೆ. ಆದ್ದರಿಂದ ಸದರಿ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೊಳಪಟ್ಟು ಮುಂದಿನ ಕ್ರಮ ವಹಿಸಲಾಗುವುದು.<br><br>ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 17968/2025ರಲ್ಲಿ ದಿನಾಂಕ:31-07-2025ರಂದು ಕೆಳಕಂಡಂತೆ ಮಧ್ಯಂತರ ಆದೇಶ ನೀಡಿರುತ್ತದೆ:- |

| | | |
|---|---|---|
| | | "....as an interim order, it is provided that the Public Service Commission may go ahead with the selection process. However, result of the selection shall not be commenced without the leave of the court"<br><br>ಮೇಲ್ಕಂಡ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ಮುಖ್ಯ ಪರೀಕ್ಷೆಯ ಗಣಕೀಕೃತ ಮೌಲ್ಯಮಾಪನಕ್ಕೆ ಸಂಬಂಧಿಸಿದ ಪ್ರಕ್ರಿಯೆಗಳನ್ನು ಪ್ರಾರಂಭಿಸಲಾಗಿರುತ್ತದೆ.<br><br>ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:17968/2025ರಲ್ಲಿ, ದಿನಾಂಕ:19.11.2025 ರಂದು "ಯಥಾಸ್ಥಿತಿ" ಕಾಪಾಡುವಂತೆ ನೀಡಿರುವ ಮಧ್ಯಂತರ ಆದೇಶವನ್ನು 2025 ನವೆಂಬರ್ 27 ರಂದು ಈ ಕೆಳಕಂಡಂತೆ ಮಾರ್ಪಡಿಸಿ ಆದೇಶಿಸಿರುತ್ತದೆ:-<br><br>06. "Considering that recruitment process has already begun pursuant to certain notifications specifying the enhanced reservation under the Karnataka Scheduled Castes and Scheduled Tribes (Reservation of Seats in Education Institutions and Appointments of Posts and Services under the State) Act, 2022 (hereafter Act), we consider it apposite to modify our order dated 19.11.2025 to direct that no further notifications for recruitment or appointment on the basis of increased reservation would be issued till the disposal of the present petitions. The recruitment pursuant to the process that is already begun, may be continued. However, any appointment made shall be subject to the final outcome of the present petitions".<br><br>ಮೇಲ್ಕಂಡ ಆದೇಶದನ್ವಯ ಮುಖ್ಯ ಪರೀಕ್ಷೆಯ ಪರೀಕ್ಷೋತ್ತರ ಕಾರ್ಯಗಳನ್ನು ಮುಂದುವರಿಸಿ ದಿನಾಂಕ:02.03.2026ರಂದು ಫಲಿತಾಂಶವನ್ನು ಪ್ರಕಟಿಸಲಾಗಿರುತ್ತದೆ. |
| ಈ | ಹೊಸದಾಗಿ ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಯನ್ನು ಕೈಗೊಳ್ಳುವ ಆಲೋಚನೆ ಏನಾದರೂ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ , ಎಷ್ಟು ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಲಾಗುವುದು? (ಪೂರ್ಣ ಮಾಹಿತಿಯನ್ನು ಒದಗಿಸುವುದು); | ಕರ್ನಾಟಕ ಗೆಜೆಟೆಡ್ ಪ್ರೊಬೇಷನರುಗಳ ನೇಮಕಾತಿ ಕೈಗೊಳ್ಳಲು ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಹುದ್ದೆಗಳಿಗೆ ಸಂಬಂಧಿಸಿದಂತೆ ಲಭ್ಯವಿರುವ ರಿಕ್ತ ಸ್ಥಾನಗಳ ವಿವರವನ್ನು ಒದಗಿಸುವಂತೆ ಸಂಬಂಧಪಟ್ಟ ಆಡಳಿತ ಇಲಾಖೆಗಳಿಗೆ ತಿಳಿಸಲಾಗಿದೆ |

**ಸಂಖ್ಯೆ: ಸಿಆಸುಇ 26 ಎಸ್‌ಎಸ್‌ಸಿ 2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ